ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ವಿಜಯಪುರದಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಮಾಡುವ ಕುರಿತು

ಶ್ರೀ ಸುನೀಲ್‌ಗೌಡ ಬಸನಗೌಡ ಪಾಟೀಲ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

559 (600) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ ನಗರದಲ್ಲಿ ನಿರ್ಮಾಣ ಮಾಡುತ್ತಿರುವ ವಿಮಾನ ನಿಲ್ದಾಣ ಯೋಜನೆಗೆ ಇದುವರೆಗೆ ಬಿಡುಗಡೆಯಾದ ಅನುದಾನ ಎಷ್ಟು; (ವಿವರ ನೀಡುವುದು)

(ಆ) ಸದರಿ ಕಾಮಗಾರಿಯು ವಿಳಂಬವಾಗಲು ಕಾರಣವೇನು; ಅನುದಾನದ ಕೊರತೆ ಏನಾದರೂ ಇದೆಯೇ; (ವಿವರ ನೀಡುವುದು)

(ಇ) ಸದರಿ ಯೋಜನೆಯ ಕಾಮಗಾರಿಯು ಯಾವಹಂತದಲ್ಲಿದೆ; (ಸಮಗ್ರ ಮಾಹಿತಿಯನ್ನು ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ವಿಮಾನ ನಿಲ್ದಾಣ ಮಾಡಲಾಗುವುದು? (ವಿವರ ನೀಡುವುದು)